ತುರುವೇಕೆರೆ ತಾಲ್ಲೂಕು ಗೋಣಿ ತುಮಕೂರು, ಹಾಗೂ ವಡವನಗಟ್ಟದಲ್ಲಿ ಪಶು ಆಸ್ಪತ್ರೆ ಪ್ರಾರಂಭಿಸುವುದು.

1260 (1104) ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ತುರುವೇಕೆರೆ) (ಅಣಯ್ಯ) :— ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ತುರುವೇಕೆರೆ ತಾಲ್ಲೂಕು ಗೋಣಿ ತುಮಕೂರು, ಹಾಗೂ ವಡವನಗಟ್ಟದಲ್ಲಿ ಪಶು ಆಸ್ಪತ್ರೆಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ವರ್ಷ ಮಂಜೂರು ಮಾಡಲಾಗುವುದೇ?

ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) :—

ಅ) ಕೊರತೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ತುರುವೇಕೆರೆ ಪಟ್ಟಣಕ್ಕೆ ಶಾದಿಮಹಲ್.

1261 (1110) ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣಯ್ಯ) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ತುರುವೇಕೆರೆ ಪಟ್ಟಣದಲ್ಲಿ ಸಾವಿರಾರು ಮುಸ್ಲಿಂ ಜನಾಂಗ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ. ಅಲ್ಪಸಂಖ್ಯಾತರ ಕಲ್ಯಾಣ ಕಾರ್ಯ ಮಾಡಲು ಶಾದಿಮಹಲ್ ಕೊಡಲು ಕ್ರಮ ಕೈಗೊಳ್ಳಲಾಗುವುದೇ

ಇ. ಈ ವರ್ಷದ ಆಯವ್ಯಯದಲ್ಲಿ ಕೊಡಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :—

ಅ) ಹೌದು.

ಆ) ತುರುವೇಕೆರೆ ತಾಲ್ಲೂಕಿನಿಂದ ಯಾವ ಪ್ರಸ್ತಾವನೆ ಬಂದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.